## ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 489
2. ಸದಸ್ಯರ ಹೆಸರು : ಶ್ರೀಮತಿ ಎಸ್. ವೀಣಾ ಅಚ್ಚಯ್ಯ
3. ಉತ್ತರಿಸಬೇಕಾದ ದಿನಾಂಕ : 16-12-2021

| ಕ್ರ ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ಕೊಡಗು ಜಿಲ್ಲೆಯ ಭಾಗಮಂಡಲದಲ್ಲಿ ಕಾವೇರಿ ನೀರಾವರಿ ನಿಗಮದ ವತಿಯಿಂದ ನಿರ್ಮಾಣಗೊಳ್ಳುತ್ತಿರುವ ಮೇಲು ಸೇತುವೆ ನಿರ್ಮಾಣ ಕಾಮಗಾರಿ ಇದುವರೆಗೂ ಪೂರ್ಣಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೊಡಗು ಜಿಲ್ಲೆಯ ಭಾಗಮಂಡಲದಲ್ಲಿ ಕಾವೇರಿ ನೀರಾವರಿ ನಿಗಮದ ವತಿಯಿಂದ ರೂ.30.61 ಕೋಟಿಗಳ ಮೊತ್ತದ ಮೇಲು ಸೇತುವೆ ನಿರ್ಮಾಣ ಕಾಮಗಾರಿಯನ್ನು ದಿನಾಂಕ:25-10-2018 ರಂದು ಪ್ರಾರಂಭಿಸಲಾಗಿದ್ದು, 18 ತಿಂಗಳ ಕಾಲಾವಧಿಯನ್ನು ನಿಗದಿಪಡಿಸಲಾಗಿದೆ. ಭೂಸ್ವಾಧೀನ ಹಾಗೂ ಕೋವಿಡ್ ನಿರ್ಬಂಧಗಳಿಂದ ಕಾಮಗಾರಿಯಲ್ಲಿ ವಿಳಂಬವಾಗಿದ್ದು, ಇಲ್ಲಿಯವರೆಗೆ ರೂ.10.50 ಕೋಟಿ ವೆಚ್ಚ ಮಾಡಲಾಗಿದೆ. |
| ಆ | ಬಂದಿದ್ದಲ್ಲಿ, ಕಾಮಗಾರಿಯ ಅಂದಾಜು ಮೊತ್ತ, ಇದುವರೆಗೆ ಬಿಡುಗಡೆಯಾಗಿರುವ ಹಾಗೂ ವಿನಿಯೋಗಿಸಿರುವ ಅನುದಾನದ ವಿವರಗಳೇನು; | |
| ಇ | ಪ್ರಸ್ತುತ ಆರ್ಥಿಕ ವರ್ಷದಲ್ಲಿ ಸದರಿ ಕಾಮಗಾರಿಗೆ ಒದಗಿಸಿರುವ ಅನುದಾನದ ವಿವರಗಳೇನು; | 2021-22 ನೇ ಸಾಲಿನಲ್ಲಿ ರೂ.3.00 ಕೋಟಿ ಅನುದಾನ ಒದಗಿಸಲಾಗಿದೆ. |
| ಈ | ಮಳೆಗಾಲದಲ್ಲಿ ದ್ವೀಪದಂತಾಗುವ ಭಾಗಮಂಡಲದಲ್ಲಿ ಸಾರ್ವಜನಿಕರಿಗೆ ಹಾಗೂ ಭಕ್ತಾಧಿಗಳಿಗೆ ಆಗುತ್ತಿರುವ ತೊಂದರೆಯನ್ನು ನಿವಾರಿಸುವ ಸಲುವಾಗಿ ಯಾವ ಕಾಲಮಿತಿಯೊಳಗೆ ಸದರಿ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು? | ಪ್ರಸ್ತುತ ಕಾಮಗಾರಿಯು ಪ್ರಗತಿಯಲ್ಲಿದ್ದು, ಜೂನ್-2022 ರೊಳಗೆ ಪೂರ್ಣಗೊಳಿಸಲು ಯೋಜಿಸಲಾಗಿದೆ. |

*ಸಂಖ್ಯೆ:ಜಸಂಇ 193 ಎನ್‌ಎಲ್‌ಎ 2021*

(ಗೋವಿಂದ ಎಂ. ಕಾರಜೋಳ)
ಜಲಸಂಪನ್ಮೂಲ ಸಚಿವರು